# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ನೌಕರರ ಕ್ರೆಡಿಟ್ ಸಹಕಾರ ಸಂಘ ನಿಯಮಿತ

ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560027

ಸಂ: 01/2022-23 ದಿನಾಂಕ: 25/01/2023

## ನೇಮಕಾತಿ ಪ್ರಕಟಣೆ

ಮೇಲ್ಕಂಡ ಸಂಘದಲ್ಲಿ ಖಾಲಿ ಇರುವ ಈ ಕೆಳಕಂಡ ವಿವಿಧ ವೃಂದಗಳ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ ಸಂ. | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ವೇತನ ಶ್ರೇಣಿ |
|---|---|---|---|
| 1 | ಸಿಬ್ಬಂದಿ ಮೇಲ್ವಿಚಾರಕರು | 2 | 33450-850-36000-950-39800-1100-46400-1250-53900-1450-62600 |
| 2 | ಲೆಕ್ಕಪತ್ರ ಮೇಲ್ವಿಚಾರಕ | 1 | 33450-850-36000-950-39800-1100-46400-1250-53900-1450-62600 |
| 3 | ಪ್ರಥಮ ದರ್ಜೆ ಸಹಾಯಕರು | 7 | 27650-650-29600-750-32600-850-36000-950-39800-1100-46400-1250-52650 |
| 4 | ದ್ವಿತೀಯ ದರ್ಜೆ ಸಹಾಯಕರು | 18 | 21400-586-22400-550-24600-600-27000-650-29600-750-32600-850-36000-950-39800-1100-42000 |
| 5 | ಕಛೇರಿ ಸಹಾಯಕರು | 11 | 18600-450-20400-500-22400-550-24600-600-27000-650-29600-750-32600 |
| | ಒಟ್ಟು | 39 | |

ಮೇಲ್ಕಂಡ ವೇತನದ ಜೊತೆಗೆ ಸಂಘದ ಆಡಳಿತ ಮಂಡಳಿಯು ಕಾಲಕಾಲಕ್ಕೆ ನಿಗಧಿಪಡಿಸುವ ತುಟ್ಟಿಭತ್ಯೆ ಮತ್ತು ಮನೆ ಬಾಡಿಗೆ ಭತ್ಯೆಯನ್ನು ನೀಡಲಾಗುವುದು.

**ವಿದ್ಯಾರ್ಹತೆ:**

**1. ಸಿಬ್ಬಂದಿ ಮೇಲ್ವಿಚಾರಕರು:**

- ರಾಜ್ಯದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಪಡೆದಿರುವ ಪದವಿ.
- ಕಂಪ್ಯೂಟರ್ ಅಪರೇಷನ್ ಮತ್ತು ಅಪ್ಲಿಕೇಷನ್ ಜ್ಞಾನವನ್ನು ಹೊಂದಿರಬೇಕು.
- ಕನ್ನಡ ಓದಲು, ಬರೆಯಲು ಬರತಕ್ಕದ್ದು.

**2. ಲೆಕ್ಕಪತ್ರ ಮೇಲ್ವಿಚಾರಕ:**

- ರಾಜ್ಯದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ವಾಣಿಜ್ಯ ವಿಷಯದಲ್ಲಿ ಪಡೆದಿರುವ ಪದವಿ.
- ಕಂಪ್ಯೂಟರ್ ಅಪರೇಷನ್ ಮತ್ತು ಅಪ್ಲಿಕೇಷನ್ ಜ್ಞಾನದ ಜೊತೆಗೆ ಟ್ಯಾಲಿ ಕೋರ್ಸ್‌ನ ತೇರ್ಗಡೆ ಪತ್ರವನ್ನು ಹೊಂದಿರಬೇಕು.
- ಕನ್ನಡ ಓದಲು, ಬರೆಯಲು ಬರತಕ್ಕದ್ದು.

**3. ಪ್ರಥಮ ದರ್ಜೆ ಸಹಾಯಕರು:**

- ರಾಜ್ಯದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಪಡೆದಿರುವ ಪದವಿ.
- ಕಂಪ್ಯೂಟರ್ ಅಪರೇಷನ್ ಮತ್ತು ಅಪ್ಲಿಕೇಷನ್ ಜ್ಞಾನವನ್ನು ಹೊಂದಿರಬೇಕು.
- ಕನ್ನಡ ಓದಲು, ಬರೆಯಲು ಬರತಕ್ಕದ್ದು.

- ಕನ್ನಡ ಓದಲು, ಬರೆಯಲು ಬರತಕ್ಕದ್ದು.

**4. ದ್ವಿತೀಯ ದರ್ಜೆ ಸಹಾಯಕರು:**

- ದ್ವಿತೀಯ ಪಿ.ಯು.ಸಿ.ಯಲ್ಲಿ ಉತ್ತೀರ್ಣರಾಗಿರಬೇಕು.
- ಕಂಪ್ಯೂಟರ್ ಆಪರೇಷನ್ ಮತ್ತು ಅಪ್ಲಿಕೇಷನ್ ಜ್ಞಾನವನ್ನು ಹೊಂದಿರಬೇಕು.
- ಕನ್ನಡ ಓದಲು, ಬರೆಯಲು ಬರತಕ್ಕದ್ದು.

**5. ಕಛೇರಿ ಸಹಾಯಕರು:**

- ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆ/ಉತ್ತೀರ್ಣರಾಗಿರಬೇಕು.
- ಕನ್ನಡ ಭಾಷೆಯನ್ನು ಒಂದು ವಿಷಯವನ್ನಾಗಿ ಓದಿರತಕ್ಕದ್ದು.
- **ಮೇಲ್ಕಂಡ ಎಲ್ಲಾ ಹುದ್ದೆಗಳಿಗೆ ವಯೋಮಿತಿ:**

1. ಪ.ಜಾತಿ/ಪ.ವರ್ಗ ಹಾಗೂ ಹಿಂದುಳಿದ ವರ್ಗಗಳ ಪ್ರವರ್ಗ–1 ರ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸುವ ದಿನಕ್ಕೆ ಕನಿಷ್ಠ 18 ವರ್ಷ ತುಂಬಿರಬೇಕು. ಗರಿಷ್ಠ 40 ವರ್ಷಗಳು ಮೀರಿರಬಾರದು.
2. ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸುವ ದಿನಕ್ಕೆ 18 ವರ್ಷ ತುಂಬಿರಬೇಕು. ಗರಿಷ್ಠ 38 ವರ್ಷಗಳು ಮೀರಿರಬಾರದು.
3. ಇತರೆ ಸಾಮಾನ್ಯ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸುವ ದಿನಕ್ಕೆ ಕನಿಷ್ಠ 18 ವರ್ಷ ತುಂಬಿರಬೇಕು. ಗರಿಷ್ಠ 35 ವರ್ಷಗಳು ಮೀರಿರಬಾರದು.

**ನಿಬಂಧನೆಗಳು:**

1. ಸಿಬ್ಬಂದಿ ಮೇಲ್ವಿಚಾರಕ ಹುದ್ದೆ, ಲೆಕ್ಕಪತ್ರ ಮೇಲ್ವಿಚಾರಕ ಹುದ್ದೆ ಮತ್ತು ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 10+2+3 ಶೈಕ್ಷಣಿಕ ಪದ್ಧತಿಯಲ್ಲಿ ಅಥವಾ ತತ್ಸಮಾನ ಪದ್ಧತಿಯಲ್ಲಿ ತೇರ್ಗಡೆ ಹೊಂದಿ ಪದವಿ ಪಡೆದಿರತಕ್ಕದ್ದು.
2. ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 10+2 ಶೈಕ್ಷಣಿಕ ಪದ್ಧತಿಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರತಕ್ಕದ್ದು.
3. ಕಛೇರಿ ಸಹಾಯಕ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 10 ವರ್ಷಗಳ ಶೈಕ್ಷಣಿಕ ಪದ್ಧತಿಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರತಕ್ಕದ್ದು.
4. ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯನ್ನು ಈ ಬಗ್ಗೆ ನಡೆಸುವ ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
5. ಅಭ್ಯರ್ಥಿಗಳ ಆಯ್ಕೆಯು ಪಾರದರ್ಶಕವಾಗಿದ್ದು, ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.
6. ಅರ್ಹ ಅಭ್ಯರ್ಥಿಗಳು ಸಂಘವು ನಿಗಧಿಪಡಿಸಿರುವ ಅರ್ಜಿ ನಮೂನೆಯನ್ನು ಸಂಘದ ಪ್ರಧಾನ ಕಛೇರಿ, ಶಾಂತಿನಗರ, ಕೆ.ಹೆಚ್.ರಸ್ತೆ, ಬೆಂಗಳೂರು–27, ಇಲ್ಲಿ ದಿನಾಂಕ: 28/01/2023 ರಿಂದ ಕೆಲಸದ ವೇಳೆಯಲ್ಲಿ ಅರ್ಜಿ ಶುಲ್ಕ ರೂ.500/–ಗಳನ್ನು ಖುದ್ದು ನಗದಾಗಿ ಪಾವತಿಸಿ, ಅರ್ಜಿಗಳನ್ನು ಪಡೆದು ನಿಗಧಿತ ನಮೂನೆಯಲ್ಲಿ ದಿನಾಂಕ: 07/02/2023 ರ ಒಳಗೆ ಸಂಘದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಖುದ್ದು ಅರ್ಜಿಗಳನ್ನು ಸಲ್ಲಿಸಿ ಸ್ವೀಕೃತಿ ಪಡೆಯತಕ್ಕದ್ದು.
7. ನಿಗಧಿಪಡಿಸಿರುವ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಲ್ಲದೇ ವಯೋಮಿತಿ ಮೀರಿದ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
8. ವಿದ್ಯಾರ್ಹತೆ ಮತ್ತು ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

ಸಹಿ/–
(ಆರ್. ಹುಚ್ಚಪ್ಪ)
ಸದಸ್ಯ ಕಾರ್ಯದರ್ಶಿ ಹಾಗೂ
ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಪ್ರ)

ಸಹಿ/–
(ಎಸ್. ಗಂಗಾಧರ್)
ನೇಮಕಾತಿ ಸಮಿತಿ ಅಧ್ಯಕ್ಷರು